**4 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,**
**ತುಮಕೂರು-ಮಧುಗಿರಿ**

**ಎಸ್.ಸಿ.ಸಂಖ್ಯೆ:** 5018/2023 ಫ್ರಾಸಾ-13
ಚಾಸಾ-11

ದಿನಾಂಕಃ 09-07-2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.

| | |
|---|---|
| **ಹೆಸರು** | ಗಂಗರಾಜು |
| **ತಂದೆಯ / ಗಂಡನ ಹೆಸರು** | ಚಿಕ್ಕಗಂಗಾಧರಪ್ಪ |
| **ವಯಸ್ಸು** | 32 |
| **ಉದ್ಯೋಗ** | ಚಾಲಕ |
| **ವಾಸಸ್ಥಳ** | ಬಂದ್ರೆಹಳ್ಳಿ |

**ಮುಖ್ಯ ವಿಚಾರಣೆ ಸರ್ಕಾರಿ ಅಭಿಯೋಜಕರಿಂದ ಃ-**

ನಿಪಿ-2 ರ ಮೇಲೆ ನನ್ನ ಸಹಿ ಇದೆ ಅದನ್ನು ಗುರುತಿಸುತ್ತೇನೆ ಸಾಕ್ಷಿ ಸಹಿಯನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು. 2 ವರ್ಷದ ಹಿಂದೆ ರಂಗನಾಥಸಾಮಿ ದೇವಸ್ಥಾನದ ಹತ್ತಿರ ಸಹಿ ಮಾಡಿರುತ್ತೇನೆ. ಪೊಲೀಸರು ಪಂಚನಾಮೆಗೆ ಬಂದಾಗ ನನ್ನ ಸಹಿ ತೆಗೆದುಕೊಂಡಿರುತ್ತಾರೆ. ಪಂಚನಾಮೆ ಕಾಲಕ್ಕೆ ನನ್ನ ಸಮಕ್ಷಮ ಏನನ್ನೂ ವಶಪಡಿಸಿಕೊಂಡಿರುವುದಿಲ್ಲ. ನಿಪಿ-2 ಕ್ಕೆ ಬೇರೆ ಯಾರು ಸಹಿ ಮಾಡಿರುತ್ತಾರೆಂದು ನನಗೆ ಗೊತ್ತಿಲ್ಲ. ನಿಪಿ-2 ರಲ್ಲಿ ಬರೆದ ವಿಷಯ ನನಗೆ ಗೊತ್ತಿಲ್ಲ.

**(ಈ ಹಂತದಲ್ಲಿ ಮಾನ್ಯ ಪಿಪಿ ಯವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರಿದ್ದರಿಂದ ಅನುಮತಿಸಲಾಯಿತು)**

**ಪಾಟೀಸವಾಲು ಮಾನ್ಯ ಸರ್ಕಾರಿ ಅಭಿಯೋಜಕರಿಂದ ಃ-**

ದಿ.03.03.2023 ರಂದು ಬೆಳಿಗ್ಗೆ 10-00 ರಿಂದ 12-00 ಗಂಟೆಯವರೆಗೆ ರಂಗನಾಥ ಸ್ವಾಮಿ ಮತ್ತು ಭಾಗ್ಯಮ್ಮ ರವರ ಅಂಗಡಿಯ ಮುಂಭಾಗದ ಸಿ.ಸಿ ರಸ್ತೆಯಲ್ಲಿ ಚಾಸಾ-1 ರವರು ಹಾಜರಿದ್ದು ಆರೋಪಿತರು ಚಾಸಾ-2 ಮತ್ತು 7 ರವರ ಮೇಲೆ ಹಲ್ಲೆ ಮಾಡಿದ ಜಾಗ ಎಂದು ತೋರಿಸಿದ್ದು ಸದರಿ ಸ್ಥಳದಲ್ಲಿ ನಿಪಿ-2 ರಂತೆ ಪಂಚನಾಮೆ ಮಾಡಿ ಸ್ಥಳದಲ್ಲಿದ್ದ ಮು.ಮಾ-1 ರಿಂದ 9 ವಸ್ತುಗಳನ್ನು ಪೊಲೀಸರು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿತರು ಕೃತ್ಯಕ್ಕೆ ಬಳಸಿದ ದೊಣ್ಣೆಗಳನ್ನು ಎತ್ತಿಟ್ಟಿರುವುದಾಗಿ ತಿಳಿಸಿ ಅವುಗಳನ್ನು ಹಾಜರುಪಡಿಸಿರುತ್ತಾರೆ ಮತ್ತು ಬಟ್ಟೆಗಳನ್ನು ಹಾಜರುಪಡಿಸಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ನಿಪಿ-2 ರಂತೆ ಪಂಚನಾಮೆ ಮಾಡಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲು ಃ-ಶ್ರೀ ಎಸ್.ಆರ್.ಆರ್. ವಕೀಲರು ಆರೋಪಿತರ ಪರವಾಗಿ ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ**

(ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

**ಒ ತಿ ಹೇ ಸ ಇದೆ.**

**4 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,**

**ತುಮಕೂರು-ಮಧುಗಿರಿ.**